ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ(ವಿ)/ಯ.ವ/ತಾಂ.ಮ/01 /17-18, ಕಾರ್ಯಪಾಲಕ ಅಭಿಯಂತರು(ವಿದ್ಯುತ್)ರವರ ಕಛೇರಿ
ಬೃ.ಬೆಂ.ಮ.ಪಾ, ಯಲಹಂಕ ವಲಯ
ಬಳ್ಳಾರಿ ರಸ್ತೆ, ಬೆಂಗಳೂರು-92.
ದಿನಾಂಕ: 15-06-2017

ತಾಂತ್ರಿಕ ಮಂಜೂರಾತಿ

ವಿಷಯ:- *Providing Electrification and Fixtures to Bangalore one building in Ward No 07 Kodigehalli Sub Division..*

ಉಲ್ಲೇಖ:- 1. ಮುಖ್ಯ ಲೆಕ್ಕಾಧಿಕಾರಿಯವರ ಕಛೇರಿ ಕಾಮಗಾರಿ ಸಂಕೇತ:-007-15-000013.
2. ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ:ಬೃ.ಬೆಂ.ಮ.ಪಾ/ಅ.ಆ/ಯ.ವ/ಆ.ಅ/1137/14-15
ದಿನಾಂಕ: 02-09-2014

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಯಲಹಂಕ ವಲಯ) ವಿದ್ಯುತ್ ವಿಭಾಗ ರವರು 2014-15 ನೇ ಸಾಲಿನ ಅಯವ್ಯಯ ಲೆಕ್ಕ ಶಿರ್ಷಿಕೆ-**P1771** ಅಡಿಯಲ್ಲಿ, ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು **ರೂ.44,500**ಗಳಿಗೆ ಪಿ.ಡಬ್ಲ್ಯ್ಯೂಡಿ. (ವಿದ್ಯುತ್) 2010-11 ಎಸ್ ಆರ್ ದರಗಳ ಹಾಗು ಅನುಮೋದಿತ ದರಗಳನ್ನು ಅಳವಡಿಸಿ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ:ಬಿಬಿಎಂಪಿ/ಅ.ಆ/ಯ.ವ./ಆ.ಅ/1137/14-15, ದಿನಾಂಕ:02.09.14ರಲ್ಲಿ ಆಡಳಿತಾತ್ಮಕ ಅನುಮೋದನೆ ಪಡೆದಿರುವ ಮೇರೆಗೆ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಉಲ್ಲೇಖ (1) ರಂತೆ ಕಾಮಗಾರಿ ಸಂಕೇತ ಹಾಗೂ ಉಲ್ಲೇಖ (2) ರಂತೆ ಅಪರ ಆಯುಕ್ತರು (ಯ.ವ) ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(1)/ಪಿಆರ್/394/16-17, ದಿನಾಂಕ: 05-05-2016 ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡಲಾಗಿದೆ. ಹಾಗೂ ತಾಂತ್ರಿಕ ಮಂಜೂರಾತಿಯ ಪುಟ ಸಂಖ್ಯೆ:80 ಕ್ಕೆ 81 ಕ್ರ.ಸಂ.01ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:-

1. ಅಂದಾಜು ಪಟ್ಟಿಯ ಮೊತ್ತ ರೂ. 10.00 ಸಾವಿರಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ಲಾಗ್ ಪುಸ್ತಕದಲ್ಲಿ ಗುತ್ತಿಗೆದಾರರು ನಿರ್ವಹಿಸಿದ ಕಾರ್ಯ ಚಟುವಟಿಕೆಗಳ ಬಗ್ಗೆ ದಾಖಲೆ ರೂಪದಲ್ಲಿ ನಮೂದಿಸಿಕೊಳ್ಳುವುದು.
3. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡ್ಯಾಟಾ ದರವನ್ನು ತಯಾರಿಸಿ, ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

15/6/17

ಕಾರ್ಯಪಾಲಕ ಅಭಿಯಂತರರು (ವಿದ್ಯುತ್)
ಯಲಹಂಕ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ ರವರ ಮಾಹಿತಿಗಾಗಿ.